ಅಧ್ಯಕ್ಷರು :— ಪ್ರಸ್ತಾವ ಏನೆಂದರೆ, "೨೦೦೦ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ-೨) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಸ್.ಎಂ. ಕೃಷ್ಣ (ಮಾನ್ಯ ಮುಖ್ಯಮಂತ್ರಿಗಳು) :— ಮಾನ್ಯ ಅಧ್ಯಕ್ಷರೆ, 2000ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ2) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು :— ವಿಧೇಯಕವನ್ನು ಮಂಡಿಸಲಾಗಿದೆ. ಅನುಬಂಧ 1

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಸ್.ಎಂ. ಕೃಷ್ಣ (ಮಾನ್ಯ ಮುಖ್ಯಮಂತ್ರಿಗಳು) :— ಮಾನ್ಯ ಅಧ್ಯಕ್ಷರೆ, 2000ರ ಕರ್ನಾಟಕ ಧನ ವಿನಿಯೋಗ(ಸಂಖ್ಯೆ-2) ವಿಧೇಯಕವನ್ನು ವಿನಿಯೋಗ (ಸಂಖ್ಯೆ-2) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವನ್ನು ಮಂಡಿಸಲಾಯಿತು

ಅಧ್ಯಕ್ಷರು :— ಪ್ರಸ್ತಾವ ಏನೆಂದರೆ, "೨೦೦೦ರ ಕರ್ನಾಟಕ ಧನ ವಿನಿಯೋಗ ವಿಧೇಯಕ (ಸಂಖ್ಯೆ-೨) ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು.

ಖಂಡ 2 ರಿಂದ 3ರವರೆಗೆ

ಅಧ್ಯಕ್ಷರು :— "ಖಂಡ ೨ ರಿಂದ ೩ ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಖಂಡ 2 ರಿಂದ 3ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ-೧ರಿತ್ಯಾದಿ

ಅಧ್ಯಕ್ಷರು :— ಪ್ರಸ್ತಾವ ಏನೆಂದರೆ, ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಎಸ್.ಎಂ. ಕೃಷ್ಣ (ಮಾನ್ಯ ಮುಖ್ಯಮಂತ್ರಿಗಳು) :— ಮಾನ್ಯ ಅಧ್ಯಕ್ಷರೆ, 2000ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ-2) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು :— ಪ್ರಸ್ತಾವ ಏನೆಂದರೆ, "೨೦೦೦ರ ಕರ್ನಾಟಕ ಧನ ವಿನಿಯೋಗ ವಿಧೇಯಕ (ಸಂಖ್ಯೆ-೨)ನ್ನು ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

(2) ವಿಧೇಯಕ ಮಂಡನೆ

ಕರ್ನಾಟಕ ಗ್ರಾಮೀಣ ಅಭ್ಯರ್ಥಿಗಳಿಗಾಗಿ (ರಾಜ್ಯ ಸಿವಿಲ್ ಸೇವೆಗಳಲ್ಲಿ) ನೇಮಕಾತಿಗಳ ಅಥವಾ ಹುದ್ದೆಗಳ ಮೀಸಲಾತಿ ವಿಧೇಯಕ 2000.

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್.ಎಂ. ಕೃಷ್ಣ (ಮಾನ್ಯ ಮುಖ್ಯಮಂತ್ರಿಗಳು) :— ಮಾನ್ಯ ಅಧ್ಯಕ್ಷರೆ, ೨೦೦೦ರ ಕರ್ನಾಟಕ ಗ್ರಾಮೀಣ ಅಭ್ಯರ್ಥಿಗಳಿಗಾಗಿ (ರಾಜ್ಯ ಸಿವಿಲ್ ಸೇವೆಗಳಲ್ಲಿ) ನೇಮಕಾತಿಗಳ ಅಥವಾ ಹುದ್ದೆಗಳ ಮೀಸಲಾತಿ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು :— ಪ್ರಸ್ತಾವ ಏನೆಂದರೆ, "೨೦೦೦ರ ಕರ್ನಾಟಕ ಗ್ರಾಮೀಣ ಅಭ್ಯರ್ಥಿಗಳಿಗಾಗಿ (ರಾಜ್ಯ ಸಿವಿಲ್ ಸೇವೆಗಳಲ್ಲಿ ನೇಮಕಾತಿಗಳ ಅಥವಾ ಹುದ್ದೆಗಳ ಮೀಸಲಾತಿ ವಿಧೇಯಕವನ್ನು ಮಂಡಿಸಲು ಅನುಮಿತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿಯನ್ನು ನೀಡಲಾಯಿತು.